# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1333 (1463) |
| ಸದಸ್ಯರ ಹೆಸರು | : | ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 24.09.2021 |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಹಾಸನ ಜಿಲ್ಲೆಯ ಪ್ರತಿ ಪಂಚಾಯಿತಿಗಳಲ್ಲೂ ತ್ಯಾಜ್ಯ ಸಂಸ್ಕರಣೆ ನಿಯಮ ಪಾಲನೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮ ಏನು? | ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯಡಿ ಹಾಸನ ಜಿಲ್ಲೆಯಲ್ಲಿ ಒಟ್ಟು 267 ಗ್ರಾಮ ಪಂಚಾಯತಿಗಳ ಪೈಕಿ 243 ಗ್ರಾಮ ಪಂಚಾಯಿತಿಗಳಲ್ಲಿ ವಿಸ್ತೃತ ಕ್ರಿಯಾ ಯೋಜನಾ (DPR) ವರದಿಗೆ ಅನುಮೋದನೆ ನೀಡಿ, 182 ಗ್ರಾಮ ಪಂಚಾಯತಿಗಳಿಗೆ ಅನುದಾನವನ್ನು ನಿಯಮಾನುಸಾರ ಮಂಜೂರಾತಿ ಮಾಡಲಾಗಿರುತ್ತದೆ.<br><br>182 ಗ್ರಾಮ ಪಂಚಾಯತಿಗಳ ಪೈಕಿ 175 ಗ್ರಾಮ ಪಂಚಾಯತಿಗಳಲ್ಲಿ ಕಸದ ಬುಟ್ಟಿಯನ್ನು ಮತ್ತು 110 ಗ್ರಾಮ ಪಂಚಾಯತಿಗಳಲ್ಲಿ ಸ್ವಚ್ಛ ವಾಹಿನಿ (ತ್ಯಾಜ್ಯ ಸಂಸ್ಕರಣಾ ವಾಹನ)ವನ್ನು ಖರೀದಿಸಲಾಗಿದೆ. ಬಾಕಿ ಗ್ರಾಮ ಪಂಚಾಯತಿಗಳಲ್ಲಿ ಖರೀದಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ಈಗಾಗಲೇ ಜಿಲ್ಲೆಯಲ್ಲಿ 35 ಸ್ವಚ್ಛ ಸಂಕೀರ್ಣ (ತ್ಯಾಜ್ಯ ವಿಲೇವಾರಿ ಘಟಕ)ಗಳ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದ್ದು, 158 ಗ್ರಾಮ ಪಂಚಾಯಿತಿಗಳಲ್ಲಿ ಸ್ವಚ್ಛ ಸಂಕೀರ್ಣಗಳ ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದ್ದು, ಒಂದು ತಿಂಗಳಲ್ಲಿ ಪೂರ್ಣಗೊಳಸಲು ಕ್ರಮವಹಿಸಲಾಗುತ್ತಿದೆ. |
| (ಆ) | ಹಾಸನ ಜಿಲ್ಲೆಯ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಪ್ರತಿನಿತ್ಯ ಎಷ್ಟು ಘನತ್ಯಾಜ್ಯ ಸಂಗ್ರಹವಾಗುತ್ತಿದೆ; ಹಾಗೂ ಅದನ್ನು ವೈಜ್ಞಾನಿಕ ರೀತಿಯಲ್ಲಿ ಬಳಕೆ ಮಾಡಲು ಮತ್ತು ವಿಲೇವಾರಿ ಮಾಡಲು ಕೈಗೊಳ್ಳುತ್ತಿರುವ ಕ್ರಮಗಳೇನು; | ಹಾಸನ ಜಿಲ್ಲೆಯ 267 ಗ್ರಾಮ ಪಂಚಾಯಿತಿಗಳಲ್ಲಿ ಪ್ರತಿನಿತ್ಯವೂ ಸುಮಾರು 25 ಟನ್‌ಗಳಷ್ಟು ಒಣತ್ಯಾಜ್ಯವು ಉತ್ಪತ್ತಿಯಾಗುತ್ತದೆ. ಪ್ರಸ್ತುತ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿಯೂ ಸ್ವಚ್ಛ ಸಂಕೀರ್ಣ ಘಟಕ ಹಾಗೂ ಘಟಕ ನಿರ್ಮಾಣ ಹಂತದಲ್ಲಿರುವ ಗ್ರಾಮ ಪಂಚಾಯಿತಿಗಳಲ್ಲಿ ತಾತ್ಕಾಲಿಕವಾಗಿ ಹಳೆ ಕಟ್ಟಡಗಳಲ್ಲಿ ಘನ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಮಾಡಲಾಗುತ್ತಿದೆ. ನರೇಗಾ ಯೋಜನೆಯಲ್ಲಿ ಗೊಬ್ಬರದ ಗುಂಡಿಗಳನ್ನು ಮಾಡಲು ಪ್ರೋತ್ಸಾಹಿಸಲಾಗುತ್ತಿದ್ದು, ಹಸಿಕಸವನ್ನು ವಿಕೇಂದ್ರಿಕೃತವಾಗಿ ಮನೆ ಹಂತದಲ್ಲಿಯೇ ಕಾಂಪೋಸ್ಟಿಂಗ್ ವಿಧಾನದಿಂದ ನಿರ್ವಹಣೆ ಮಾಡಲಾಗುತ್ತಿದೆ. |
| (ಇ) | ಚನ್ನರಾಯಪಟ್ಟಣ ತಾಲ್ಲೂಕಿನ ಜಂಬೂರು ಗ್ರಾಮದಲ್ಲಿ ತಿಪ್ಪೆಗುಂಡಿಗಳ ವೈಜ್ಞಾನಿಕ ಹಾಗೂ ಆಧುನಿಕ ಸಂಸ್ಕರಣಾ ಘಟಕಗಳ ನಿರ್ಮಾಣ ಕಾಮಗಾರಿಗಳಿಗೆ ಅನುಮೋದನೆ ದೊರೆತಿದ್ದು, | ಚನ್ನರಾಯಪಟ್ಟಣ ತಾಲ್ಲೂಕು ಜಂಬೂರು ಗ್ರಾಮ ಪಂಚಾಯತಿಯ ಸ್ವಚ್ಛ ಸಂಕೀರ್ಣಕ್ಕೆ ಸಂಬಂಧಿಸಿದಂತೆ ಜಂಬೂರು ಗ್ರಾಮದ ಸರ್ವೆ ನಂ 222 ರಲ್ಲಿ ಕಂದಾಯ ಇಲಾಖೆಯಿಂದ ಭೂಮಿ ಮಂಜೂರಾಗಿ, ವಿಸ್ತೃತ ಯೋಜನಾ ವರದಿ ದಿನಾಂಕ 13.08.2020ರಲ್ಲಿ |

| | | |
|---|---|---|
| | ಇಲ್ಲಿಯವರೆಗೆ ಕಾಮಗಾರಿಗಳನ್ನು ಪ್ರಾರಂಭಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; ಮತ್ತು ಯಾವ ಕಾಲಮಿತಿಯೊಳಗೆ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು? (ವಿವರ ನೀಡುವುದು) | ಅನುಮೋದನೆಯಾಗಿರುತ್ತದೆ.<br><br>ಆದರೆ ಆ ಜಾಗವೂ ಅತಿಕ್ರಮವಾಗಿದ್ದು, ಈ ಕುರಿತು ಕಾರ್ಯನಿರ್ವಾಹಕ ಅಧಿಕಾರಿಗಳು, ಚನ್ನರಾಯಪಟ್ಟಣ ಇವರ ಮಧ್ಯಸ್ಥಿಕೆಯಲ್ಲಿ ಸಮಸ್ಯೆ ಬಗೆಹರಿಸಲಾಗಿದೆ. ಪ್ರಸ್ತುತ ಅದೇ ಜಾಗದಲ್ಲಿ ಘನ ತ್ಯಾಜ್ಯ ವಿಲೇವಾರಿಗಾಗಿ ಸ್ವಚ್ಛ ಸಂಕೀರ್ಣ ಘಟಕ ಕಾಮಗಾರಿ ಪ್ರಗತಿಯಲ್ಲಿದೆ.<br><br>ಪ್ರಸ್ತುತ ತಾತ್ಕಾಲಿಕವಾಗಿ ಹಳೆ ಕಟ್ಟಡದಲ್ಲಿ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಮಾಡಲಾಗುತ್ತಿದ್ದು, ಅಕ್ಟೋಬರ್-2021 ಅಂತ್ಯದೊಳಗೆ ಕಾಮಗಾರಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ. |

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು